ನೀರಿನ ಸೌಲಭ್ಯ ಹಾಗೂ ಒಳ ಚರಂಡಿಗಳು ಮತ್ತು ಪರಿಶಿಷ್ಟ ಜಾತಿ : ಪಂಗಡಗಳ ತಾಂಡಾ : ಕಾಲನಿಗಳಿಗೆ ವಿದ್ಯುದ್ದೀಕರಣ.

	ಕೋಟಿ ರೂ.ಗಳಲ್ಲಿ
ಆಯವ್ಯಯದಲ್ಲಿ ಇಲ್ಲಿಯವರೆಗೆ ಒದಗಿಸಲಾದ ಹಣ	127.00
ಇಲ್ಲಿಯವರೆಗೆ ಖರ್ಚಾದ ಹಣ	101.00

ಆ) 52 ತಾಲ್ಲೂಕುಗಳು

ಪುನರ್‌ವಸತಿ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವುದು

2405 (3019) : ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ್) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಜಲಾಶಯದ ಪುನರ್‌ವಸತಿ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಆ) ಇಲ್ಲದಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) ಈ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಪ್ರಸ್ತಾವನೆ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು.

ಬೆಳಗಾವಿ ಜಿಲ್ಲೆಯ ಗಡಿ ಭಾಗದ ರಸ್ತೆಗಳ ಸುಧಾರಣೆ

2406 (3020) : ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಗಡಿಭಾಗದ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿದ್ದು, ಸಂಚಾರಕ್ಕೆ ಯೋಗ್ಯವಾಗಿಲ್ಲದ ಕಾರಣ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದ್ದಲ್ಲಿ, ಈ ಗಡಿಭಾಗದ ರಸ್ತೆಗಳ ಸುಧಾರಣೆಗೆ ಸರ್ಕಾರವು ಹಾಕಿಕೊಂಡಿರುವ ಕಾರ್ಯಕ್ರಮಗಳೇನು:

ಇ) ಈ ರಸ್ತೆಗಳ ಸುಧಾರಣೆಗೆ ತಗಲುವ ಅಂದಾಜು ವೆಚ್ಚವೆಷ್ಟು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಬೆಳಗಾವಿ ಜಿಲ್ಲೆಯ ಗಡಿ ಭಾಗದ ರಸ್ತೆಗಳನ್ನು ವಾರ್ಷಿಕ ನಿರ್ವಹಣೆಯಡಿ ತಗ್ಗು ಗುಂಡಿಗಳನ್ನು ತುಂಬಿ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ.

ಆ) ಕಳೆದ ಐದು ವರ್ಷಗಳಲ್ಲಿ 75 ಕೋಟಿ ರೂ. ಕಾರ್ಯಕ್ರಮ, ಪ್ರಕೃತ ವಿಕೋಪ ಪರಿಹಾರ ನಿಧಿ, ನಬಾರ್ಡ್ ಕಾರ್ಯಕ್ರಮ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಎಂಎಡಿಬಿ ಹಾಗೂ ರಸ್ತೆಗಳ ವಾರ್ಷಿಕ ನಿರ್ವಹಣೆ ಯೋಜನೆಯಡಿ ಗಡಿ ಭಾಗದ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

ಇ) ಬೆಳಗಾವಿ ಜಿಲ್ಲೆಯ ಗಡಿ ಭಾಗದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸುಮಾರು ರೂ. 1,590/- ಲಕ್ಷಗಳು, ಬೇಕಾಗುತ್ತದೆಂದು ಅಂದಾಜು ಮಾಡಲಾಗಿದೆ.